## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 809 ಗ್ರಾಪಂಅ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 26-11-2014.

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11ಎ ಮತ್ತು ನಮೂನೆ 11ಬಿ ಗಳನ್ನು ಗ್ರಾಮ ಪಂಚಾಯಿತಿಗಳು ಅನಧಿಕೃತವಾಗಿ ವಿತರಿಸುತ್ತಿರುವ ಬಗ್ಗೆ.

**ಉಲ್ಲೇಖ:**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 ದಿನಾಂಕ:14-06-2013.
2. ಸರ್ಕಾರದ ಸೇರ್ಪಡೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 ದಿನಾಂಕ:15-06-2013.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾಗ-6) ದಿನಾಂಕ:21-01-2014.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾಗ-6) ದಿನಾಂಕ:03-02-2014.
5. ಕಂದಾಯ ಇಲಾಖೆಯ ತಿದ್ದೋಲೆ ಸಂಖ್ಯೆ: ಕಂಇ 6 ಮುನೋಮು 2013 ದಿನಾಂಕ:23-04-2014.

* * * *

ಉಲ್ಲೇಖ (1) ರಿಂದ (3) ರವರೆಗಿನ ಸರ್ಕಾರದ ಅಧಿಸೂಚನೆಗಳಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ (ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ತಿದ್ದುಪಡಿ ತಂದು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11ಎ ಮತ್ತು 11ಬಿ ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರ ಡಿಜಿಟಲ್ ಸಹಿಯ ಮೂಲಕ ವಿತರಿಸಲು ತಿಳಿಸಲಾಗಿದೆ.

ಉಲ್ಲೇಖ (4) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11ಎ ಮತ್ತು 11ಬಿ ಗಳನ್ನು ವಿತರಿಸುವಾಗ ಅನುಸರಿಸಬೇಕಾದ ಕಾರ್ಯವಿಧಾನದ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಉಲ್ಲೇಖ (5) ರ ಕಂದಾಯ ಇಲಾಖೆಯ ತಿದ್ದೋಲೆಯಲ್ಲಿ ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಾಯಿಸಲು ಗ್ರಾಮ ಪಂಚಾಯತಿ ಸಕ್ಷಮ ಪ್ರಾಧಿಕಾರಿಯಿಂದ ಡಿಜಿಟಲ್ ಸಹಿ ಮಾಡಿ ನೀಡಲ್ಪಟ್ಟಿರುವ ಗಣಕೀಕೃತ ನಮೂನೆ 9, ಮತ್ತು 11ಎ ಅಥವಾ ನಮೂನೆ 11ಬಿ ಗಳನ್ನು ಪಡೆಯುವಂತೆ ತಿಳಿಸಲಾಗಿದೆ.

ಕೆಲವು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಕೈಬರಹದ ಮೂಲಕ ನಮೂನೆ 9, 11ಎ ಮತ್ತು 11ಬಿ ಗಳನ್ನು ವಿತರಿಸುತ್ತಿರುವುದು, ನಮೂನೆ 11ಬಿ ಗೆ ಸಂಬಂಧಿಸಿದ ದಾಖಲಾತಿಗಳನ್ನು ಪಡೆಯದಿರುವುದು, ಅನಧಿಕೃತವಾಗಿ ಸೃಷ್ಟಿಸಿರುವ ನಕಲಿ ನಮೂನೆ 11ಬಿ ಗಳ ಆಧಾರದ ಮೇಲೆ ಉಪ ನೊಂದಣಾಧಿಕಾರಿಗಳ ಕಚೇರಿಯಲ್ಲಿ ನೊಂದಣಿ ಮಾಡುತ್ತಿರುವುದರ ಬಗ್ಗೆ ಸಾರ್ವಜನಿಕರು ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

ದಿನಾಂಕ:03/02/2014 ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸುತ್ತೋಲೆ ಮತ್ತು ಆಗಿಂದಾಗ್ಗೆ ಸರ್ಕಾರದ ಪತ್ರಗಳ ಮೂಲಕ ನೀಡುವ ನಿರ್ದೇಶನಗಳನ್ನು ಉಲ್ಲಂಘಿಸಿ ನಮೂನೆ 9, 11ಎ ಮತ್ತು ನಮೂನೆ 11ಬಿ ವಿತರಿಸಲು ಕಾರಣಕರ್ತರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರಂತೆ ಶಿಸ್ತು ಕ್ರಮ ಕೈಗೊಳ್ಳಲು ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಅಧಿಕಾರಿಗಳು ಕ್ರಮ ಕೈಗೊಳ್ಳತಕ್ಕದ್ದು.

ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ನಿಯಮಬಾಹಿರವಾಗಿ ನಮೂನೆ 9, 11ಎ ಮತ್ತು 11ಬಿ ವಿತರಿಸಲು ಕಾರಣರಾದಲ್ಲಿ ದುರ್ವತನೆ ಎಂದು ಪರಿಗಣಿಸಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ), 48(4) ಮತ್ತು 48(5) ರನ್ವಯ ಕ್ರಮವಾಗಿ ಗ್ರಾಮ ಪಂಚಾಯಿತಿ ಸದಸ್ಯತ್ವ, ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದಿಂದ ತೆಗೆದುಹಾಕಲು ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸುವಂತೆ ತಿಳಿಸಿದೆ.

ಆಡಳಿತದಲ್ಲಿ ಸೌಹಾರ್ದಯುತವಾದ ವಾತಾವರಣ, ಸಹಬಾಳ್ವೆ, ಸಹಕಾರ ಮನೋಭಾವನೆ, ಪರಸ್ಪರ ಹಿತ-ಮಿತ ತತ್ವಗಳೊಂದಿಗೆ ಸರ್ಕಾರದ ಕಾರ್ಯವನ್ನು ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಹಾಗೂ ಗ್ರಾಮ ಪಂಚಾಯತಿ ನೌಕರರು ಕಾರ್ಯನಿರ್ವಹಿಸಬೇಕಾಗಿರುವುದು ಅವಶ್ಯಕವಾಗಿದೆ. ಅಲ್ಲದೆ ಯಾವುದೇ ಕಾನೂನು ತೊಡಕಿಗೆ ಅವಕಾಶ ಮಾಡಿಕೊಡದೆ ಸುಗಮ ಆಡಳಿತವನ್ನು ನೀಡುವುದು ಕರ್ನಾಟಕ ನಾಗರೀಕ ಸೇವಾ ನಿಯಮಗಳನ್ವಯ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರನ ಕರ್ತವ್ಯವಾಗಿರುತ್ತದೆ.

ಈ ಮೇಲ್ಕಂಡಂತೆ ಸುತ್ತೋಲೆಯ ಅಂಶಗಳನ್ನು ಪರಿಪಾಲಿಸಬೇಕೆಂದು ಈ ಮೂಲಕ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳಿಗೆ ಸೂಚಿಸಿದೆ.

(ಕೆ. ಯಾಲಕ್ಕಿಗೌಡ) 28/4/14
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು.
4) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5) ಹೆಚ್ಚುವರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/809/ಗ್ರಾಪಂಅ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 26-11-2014.

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಹಿರಿಯ ತಾಂತ್ರಿಕ ನಿರ್ದೇಶಕರು,
ಎನ್.ಐ.ಸಿ,
**ಬೆಂಗಳೂರು.**

ಮಾನ್ಯರೆ,

**ವಿಷಯ:** ಆನೇಕಲ್ ತಾಲ್ಲೂಕು, ಮುತ್ತಾನಲ್ಲೂರು, ಹುಸ್ಕೂರು ಮತ್ತು ನೆರಿಗಾ ಗ್ರಾಮ ಪಂಚಾಯತಿಯಲ್ಲಿ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಮಾಡಿರುವ ನಮೂನೆ 11ಬಿ ತೆರಿಗೆ ನಿರ್ಧರಣೆ ಪಟ್ಟಿ ರದ್ದುಪಡಿಸಲು ಕೋರಿರುವ ಬಗ್ಗೆ.

**ಉಲ್ಲೇಖ:** ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರ ಪತ್ರ ಸಂ: ಆ.ತಾ.ಪಂ:11ಬಿ/33/2014-14 ದಿ: 29-10-2014.

* * * * *

ಮೇಲ್ಕಂಡ ವಿಷಯ ಮತ್ತು ಉಲ್ಲೇಖದ ಕಡೆಗೆ ತಮ್ಮ ಗಮನ ಸೆಳೆಯುತ್ತಾ, ಉಲ್ಲೇಖಿತ ಪತ್ರದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರು ಆನೇಕಲ್ ತಾಲ್ಲೂಕು, ಮುತ್ತಾನಲ್ಲೂರು, ಹುಸ್ಕೂರು ಮತ್ತು ನೆರಿಗಾ ಗ್ರಾಮ ಪಂಚಾಯತಿಯಲ್ಲಿ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಕ್ರಮವಾಗಿ 206, 478 ಮತ್ತು 44 ನಮೂನೆ 11ಬಿ ತೆರಿಗೆ ನಿರ್ಧರಣೆ ಪಟ್ಟಿ ಮಾಡಿರುವುದನ್ನು ರದ್ದುಪಡಿಸಲು ಕೋರಿರುತ್ತಾರೆ.

ಆದುದರಿಂದ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆ 11ಬಿ ವಿತರಣೆ ಮಾಡಿರುವುದನ್ನು ರದ್ದುಪಡಿಸಲು ಕ್ರಮವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

**(ಕೆ. ಯಾಲಕ್ಕಿಗೌಡ)** 28/11
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/809 /ಗ್ರಾಪಂಅ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 26-11-2014.

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ನೊಂದಣಿ ಮಹಾ ಪರಿವೀಕ್ಷಕರು,
ಹಾಗೂ ಮುದ್ರಾಂಕಗಳ ಆಯುಕ್ತರು,
8ನೇ ಮಹಡಿ, ಕಂದಾಯ ಭವನ,
ಕೆ.ಜಿ. ರಸ್ತೆ, ಬೆಂಗಳೂರು.

ಮಾನ್ಯರೆ,

**ವಿಷಯ:** ಆನೇಕಲ್ ತಾಲ್ಲೂಕು, ಮುತ್ತಾನಲ್ಲೂರು, ಹುಸ್ಕೂರು ಮತ್ತು ನೆರಿಗಾ ಗ್ರಾಮ ಪಂಚಾಯತಿಯಲ್ಲಿ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಮಾಡಿರುವ ನಮೂನೆ 11ಬಿ ತೆರಿಗೆ ನಿರ್ಧರಣೆ ಪಟ್ಟಿ ರದ್ದುಪಡಿಸಲು ಕೋರಿರುವ ಬಗ್ಗೆ.

**ಉಲ್ಲೇಖ:** ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರ ಪತ್ರ ಸಂ: ಆ.ತಾ.ಪಂ:11ಬಿ/33/2014-14 ದಿ: 29-10-2014.

* * * * *

ಮೇಲ್ಕಂಡ ವಿಷಯ ಮತ್ತು ಉಲ್ಲೇಖದ ಕಡೆಗೆ ತಮ್ಮ ಗಮನ ಸೆಳೆಯುತ್ತಾ, ಉಲ್ಲೇಖಿತ ಪತ್ರದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರು ಆನೇಕಲ್ ತಾಲ್ಲೂಕು, ಮುತ್ತಾನಲ್ಲೂರು, ಹುಸ್ಕೂರು ಮತ್ತು ನೆರಿಗಾ ಗ್ರಾಮ ಪಂಚಾಯತಿಯಲ್ಲಿ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಕ್ರಮವಾಗಿ 206, 478 ಮತ್ತು 44 ನಮೂನೆ 11ಬಿ ತೆರಿಗೆ ನಿರ್ಧರಣೆ ಪಟ್ಟಿ ಮಾಡಿರುವುದನ್ನು ರದ್ದುಪಡಿಸಲು ಕೋರಿರುತ್ತಾರೆ.

ಮುಂದುವರೆದು, ಅನಧಿಕೃತ 11ಬಿ ವಿತರಣೆ ಮಾಡಿರುವ ಆಧಾರದ ಮೇಲೆ ನೊಂದಣೆಯಾಗಿರುವ ದಾಸ್ತಾವೇಜುಗಳನ್ನು ರದ್ದುಪಡಿಸಲು ಹಾಗೂ ಅನಧಿಕೃತವಾಗಿ 11ಬಿ ವಿತರಣೆ ಮಾಡಿರುವುದರ ಆಧಾರದ ಮೇಲೆ ಯಾವುದನ್ನು ಸ್ವತ್ತನ್ನು ನೊಂದಣಿ ಮಾಡಬಾರದೆಂದು ಬೆಂಗಳೂರು ಜಿಲ್ಲೆಗೆ ಸಂಬಂಧಪಟ್ಟ ಎಲ್ಲಾ ಉಪನೊಂದಾಣಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ತಮ್ಮನ್ನು ಕೋರಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರು ತಿಳಿಸಿರುತ್ತಾರೆ.

ಆದುದರಿಂದ ಅನಧಿಕೃತ 11ಬಿ ವಿತರಣೆ ಮಾಡಿರುವ ಆಧಾರದ ಮೇಲೆ ನೊಂದಣೆಯಾಗಿರುವ ದಾಸ್ತಾವೇಜುಗಳನ್ನು ರದ್ದುಪಡಿಸಲು ಹಾಗೂ ಅನಧಿಕೃತವಾಗಿ 11ಬಿ ವಿತರಣೆ ಮಾಡಿರುವುದರ ಆಧಾರದ ಮೇಲೆ ಯಾವುದನ್ನು ಸ್ವತ್ತನ್ನು ನೊಂದಣಿ ಮಾಡಬಾರದೆಂದು ಎಲ್ಲಾ ಉಪನೊಂದಣಾಧಿಕಾರಿಗಳಿಗೆ ನಿರ್ದೇಶನ ನೀಡಬೇಕೆಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಕೆ. ಯಾಲಕ್ಕಿಗೌಡ) 28/11/14

ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/809/ಗ್ರಾಪಂಅ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 26-11-2014.

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತಿ,
**ಬೆಂಗಳೂರು ನಗರ ಜಿಲ್ಲೆ.**

ಮಾನ್ಯರೆ,

**ವಿಷಯ:** ಆನೇಕಲ್ ತಾಲ್ಲೂಕು, ಮುತ್ತಾನಲ್ಲೂರು, ಹುಸ್ಕೂರು ಮತ್ತು ನೆರಿಗಾ ಗ್ರಾಮ ಪಂಚಾಯತಿಯಲ್ಲಿ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಮಾಡಿರುವ ನಮೂನೆ 11ಬಿ ತೆರಿಗೆ ನಿರ್ಧರಣೆ ಪಟ್ಟಿ ರದ್ದುಪಡಿಸಲು ಕೋರಿರುವ ಬಗ್ಗೆ.

**ಉಲ್ಲೇಖ:** ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರ ಪತ್ರ ಸಂ: ಆ.ತಾ.ಪಂ:11ಬಿ/33/2014-14 ದಿ: 29-10-2014.

* * * * *

ಮೇಲ್ಕಂಡ ವಿಷಯ ಮತ್ತು ಉಲ್ಲೇಖದ ಕಡೆಗೆ ತಮ್ಮ ಗಮನ ಸೆಳೆಯುತ್ತಾ, ಉಲ್ಲೇಖಿತ ಪತ್ರದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಆನೇಕಲ್ ರವರು ಆನೇಕಲ್ ತಾಲ್ಲೂಕು, ಮುತ್ತಾನಲ್ಲೂರು, ಹುಸ್ಕೂರು ಮತ್ತು ನೆರಿಗಾ ಗ್ರಾಮ ಪಂಚಾಯತಿಯಲ್ಲಿ ನಿಯಮಬಾಹಿರವಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಕ್ರಮವಾಗಿ 206, 478 ಮತ್ತು 44 ನಮೂನೆ 11ಬಿ ತೆರಿಗೆ ನಿರ್ಧರಣೆ ಪಟ್ಟಿ ಮಾಡಿರುವುದನ್ನು ರದ್ದುಪಡಿಸಲು ಕೋರಿರುತ್ತಾರೆ.

ಮುಂದುವರೆದು, ಸದರಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ನಮೂನೆ 11ಬಿ ಅನ್ನು ಅನಧಿಕೃತವಾಗಿ ವಿತರಿಸಿರುವ ಬಗ್ಗೆ ಕೂಡಲೇ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಂಡು, ತೆಗೆದುಕೊಂಡ ಕ್ರಮದ ಬಗ್ಗೆ ವಿವರವಾದ ವರದಿಯನ್ನು ಸರ್ಕಾರಕ್ಕೆ ಒಂದು ವಾರದೊಳಗಾಗಿ ಸಲ್ಲಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

28/11/14

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.